**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 63 ಆರ್‌ಟಿಐ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 22.04.2014.

**ಸುತ್ತೋಲೆ**

ವಿಷಯ: ಕರ್ನಾಟಕ ಮಾಹಿತಿ ಆಯೋಗವು ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ (20) ರಡಿ ವಿಧಿಸುವ ದಂಡ ಶುಲ್ಕವನ್ನು ವಸೂಲು ಮಾಡುವ ಬಗ್ಗೆ

ಉಲ್ಲೇಖ: ಕರ್ನಾಟಕ ಮಾಹಿತಿ ಆಯೋಗದ 2012–13ನೇ ಸಾಲಿನ ವಾರ್ಷಿಕ ವರದಿಯ ಶಿಫಾರಸ್ಸುಗಳು

---0---

ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 20(1)(ಪುಟ 5CF)ರಡಿ ಕರ್ನಾಟಕ ಮಾಹಿತಿ ಆಯೋಗವು ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ದಂಡವನ್ನು ವಿಧಿಸುತ್ತದೆ ಮತ್ತು ವಿಧಿಸಿದ ದಂಡವನ್ನು ವಸೂಲಿ ಮಾಡಿ ಅದನ್ನು ಖಜಾನೆಗೆ ಜಮಾ ಮಾಡುವಂತೆ ನಿಯಂತ್ರಣಾಧಿಕಾರಿಗಳಿಗೆ ನಿರ್ದೇಶಿಸುತ್ತದೆ. ಹಾಗೆ ವಿಧಿಸಿದ ದಂಡವನ್ನು ಕೆಲವು ನಿಯಂತ್ರಣಾಧಿಕಾರಿಗಳು ವಸೂಲಿ ಮಾಡುತ್ತಿಲ್ಲವೆಂದು ಅಥವಾ ದಂಡದ ಮೊತ್ತವನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಪಾವತಿ ಮಾಡುತ್ತಿಲ್ಲವೆಂದು ಆಯೋಗವು ಗಮನಿಸಿದೆ. ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 20(1)ರಡಿ ವಿಧಿಸಲಾದ ದಂಡವನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಯ ಸಂಬಳದಿಂದ ವಸೂಲಿ ಮಾಡುವುದಕ್ಕೆ ಮತ್ತು ಅದನ್ನು ಖಜಾನೆಗೆ ಜಮಾ ಮಾಡುವುದಕ್ಕೆ ಸಂಬಂಧಿಸಿದಂತೆ, ಕಟ್ಟುನಿಟ್ಟಿನ ಸೂಚನೆಗಳನ್ನು ತಮ್ಮ ಆಡಳಿತದ ಅಧೀನಕ್ಕೊಳಪಡುವ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ನೀಡುವಂತೆ ಕೋರಲಾಗಿದೆ.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.